ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: https://kptcl.karnataka.gov.in
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿ025521
ಕಂಪನಿ ಅಧಿಕೃತ ಕಛೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು 560 009

ಸಂಖ್ಯೆ: ಕವಿಪ್ರನಿನಿ/ಬಿಆರ್‌ಎ/ಎಸ್‌ಎ3/5474/97-98/2 ದಿನಾಂಕ: 3 FEB 2021

## ಸುತ್ತೋಲೆ

ವಿಷಯ: ಅಧಿಕಾರಿಗಳು ಕಾರ್ಯಭಾರವನ್ನು ಹಸ್ತಾಂತರಿಸುವಾಗ ಅನುಸರಿಸಬೇಕಾದ ಕ್ರಮಗಳ ಬಗ್ಗೆ.

---

ನಿಗಮದಲ್ಲಿ ಉನ್ನತ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಲವು ಅಧಿಕಾರಿಗಳು ತಮ್ಮ ವರ್ಗಾವಣೆ, ಪದೋನ್ನತಿ, ನಿಯೋಜನೆ, ವಯೋನಿವೃತ್ತಿ, ಸ್ವಯಂ ನಿವೃತ್ತಿ ಮತ್ತಿತರ ಸಂಧರ್ಭಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಛೇರಿಗಳಿಂದ ಕಾರ್ಯಮುಕ್ತಿ ಹೊಂದುವಾಗ, ಅರ್ಹ ಅಧಿಕಾರಿಗಳಿಗೆ ಹುದ್ದೆಯ ಕಾರ್ಯಭಾರವನ್ನು ಹಸ್ತಾಂತರಿಸದೇ, ಹಲವು ಗೊಂದಲಗಳನ್ನು ಸೃಷ್ಟಿಸುತ್ತಿರುವುದು ನಿಗಮದ ಗಮನಕ್ಕೆ ಬಂದಿದ್ದು, ಈ ವಿಷಯವನ್ನು ನಿಗಮವು ಬಹಳ ಗಂಭೀರವಾಗಿ ಪರಿಗಣಿಸಿದೆ.

ಆದ್ದರಿಂದ, ಇನ್ನು ಮುಂದೆ ಅಧೀಕ್ಷಕ ಇಂಜಿನಿಯರ್(ವಿ) ಹಾಗೂ ಸಮಾನ ಹುದ್ದೆಯ ಮತ್ತು ಹೆಚ್ಚಿನ ಹುದ್ದೆಯ ಅಧಿಕಾರಿಗಳು <u>ವಯೋನಿವೃತ್ತಿ ಹೊಂದುವ ಸಂಧರ್ಭದಲ್ಲಿ,</u> ಸದರಿ ಅಧಿಕಾರಿಯ ವಯೋನಿವೃತ್ತಿಯಿಂದ ಖಾಲಿಯಾಗುವ ಹುದ್ದೆಗೆ ಯಾವುದೇ ಅಧಿಕಾರಿಯನ್ನು ಸ್ಥಳ ನಿಯುಕ್ತಿಗೊಳಿಸಿಲ್ಲದಿದ್ದಲ್ಲಿ, ಸದರಿ ಹುದ್ದೆಯ ಕಾರ್ಯಭಾರವನ್ನು ಯಾವ ಅಧಿಕಾರಿಗೆ ಹಸ್ತಾಂತರಿಸಬೇಕೆಂಬ ವಿಷಯದಲ್ಲಿ ಸಂಬಂಧಿಸಿದ ಕಛೇರಿಯ ಮುಖ್ಯಸ್ಥರು ಮುಂಚಿತವಾಗಿ ಕವಿಪ್ರನಿನಿ ನಿಗಮ ಕಾರ್ಯಾಲಯದ ಪೂರ್ವಾನುಮೋದನೆಯನ್ನು ಪಡೆಯಲು ಮತ್ತು ಅಧಿಕಾರಿಗಳನ್ನು <u>ವರ್ಗಾವಣೆ, ಪದೋನ್ನತಿ, ನಿಯೋಜನೆ, ಮತ್ತಿತರ ಕಾರಣಗಳಿಂದ ಕಾರ್ಯಮುಕ್ತಿಗೊಳಿಸಬೇಕಾದ ಸಂಧರ್ಭಗಳಲ್ಲಿ,</u> ಸಂಬಂಧಿಸಿದ ಕಛೇರಿಯ ಮುಖ್ಯಸ್ಥರು <u>ಮೌಖಿಕವಾಗಿ ಅಥವಾ ದೂರವಾಣಿ ಮೂಲಕ,</u> ಸದರಿ ಅಧಿಕಾರಿಯ ಕಾರ್ಯಭಾರವನ್ನು ಯಾವ ಅಧಿಕಾರಿಗೆ ಹಸ್ತಾಂತರಿಬೇಕೆಂಬ ವಿಷಯದಲ್ಲಿ ಕವಿಪ್ರನಿನಿ ನಿಗಮ ಕಾರ್ಯಾಲಯದ ಪೂರ್ವಾನುಮೋದನೆಯನ್ನು ಪಡೆಯಲು ಸೂಚಿಸಿದೆ.

ಮೇಲಿನ ಸೂಚನೆಗಳನ್ನು ಸಂಬಂಧಿಸಿದ ಕಛೇರಿಗಳ ಮುಖ್ಯಸ್ಥರು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಿದೆ.

ನಿರ್ದೇಶಕರು(ಆಡಳಿತ ಮತ್ತು ಮಾ.ಸಂ.)
ಕವಿಪ್ರನಿನಿ.

## ಮೆಮೋ

ಕ್ರಮಾಂಕ:ಪ್ರವ್ಯ(ಆ ಮತ್ತು ಮಾ.ಸಂ)/ಉಪ್ರವ್ಯ/ಸಪ್ರವ್ಯ/ವ್ಯ/ಹಿಸ-2/20-21/ cys-1580 ದಿನಾಂಕ: 11 FEB 2021

ನಿಗಮದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧೀಕ್ಷಕ ಇಂಜಿನಿಯರ್(ವಿ) ಹಾಗೂ ಸಮಾನ ಹುದ್ದೆಯ ಮತ್ತು ಹೆಚ್ಚಿನ ಹುದ್ದೆಯ ಕಾರ್ಯಭಾರವನ್ನು ಹಸ್ತಾಂತರಿಸುವಾಗ ಅನುಸರಿಸಬೇಕಾದ ಕ್ರಮಗಳ ಬಗ್ಗೆ ನಿರ್ದೇಶಕರು(ಆ ಮತ್ತು ಮಾ.ಸಂ), ಕವಿಪ್ರನಿನಿ, ಬೆಂಗಳೂರುರವರ ಸುತ್ತೋಲೆ ಸಂಖ್ಯೆ:ಕವಿಪ್ರನಿನಿ/ಬಿಆರ್‌ಎ/ಎಸ್‌ಎ3/5474/97-98/2 ದಿನಾಂಕ: 03.02.2021ನ್ನು ಚಾವಿಸನಿನಿಯಲ್ಲಿ ಯಥಾವತ್ತಾಗಿ ಅಳವಡಿಸಿಕೊಳ್ಳಲು ಆದೇಶಿಸಲಾಗಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ)
ಚಾ.ವಿ.ಸ.ನಿ.ನಿ., ಮೈಸೂರು.

**<u>ಪ್ರತಿಗಳು:</u>**

- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರು.

ಮು.ತಿ.ನೋ.

- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ, ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ ಹಾಗು ಅಗತ್ಯ ಕ್ರಮಕ್ಕಾಗಿ.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಆ.ಕಾ-ವ್ಯ.ನಿ/ನಿ(ತಾಂ)/ಮು.ಆ.ಅ
- ಸ-2(ಆ ಮತ್ತು ಮಾ.ಸಂ)/ಪ್ರ.ಕ.